## ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಗುಂಡ್ಲುಪೇಟೆ

ಸಿಸಿ ನಂಃ 452/2019

| | | |
|---|---|---|
| ಸಾಕ್ಷಿದಾರರ ಹೆಸರು | ಎಂ.ಎನ್.ಭಾಸ್ಕರ್ | ಪ್ರಮಾಣ ವಚನ ಬೋಧಿಸಿದ<br>ದಿನಾಂಕಃ 10.03.2022 |
| ತಂದೆಯ ಹೆಸರು/ ಗಂಡನ ಹೆಸರು | ಲೇ.ಕೆ.ನಾಗರಾಜು | |
| ವಯಸ್ಸು | 35 ವರ್ಷ | |
| ಉದ್ಯೋಗ | ಅಬಕಾರಿ ರಕ್ಷಕ, | ಪ್ರಾಸಾಃ 3 |
| ವಾಸ | ಗುಂಡ್ಲುಪೇಟೆ | ಚಾಸಾಃ 6 |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿರವರಿಂದಃ**

ನಾನು ಗುಂಡ್ಲುಪೇಟೆ ಅಬಕಾರಿ ಇಲಾಖೆಯಲ್ಲಿ 2015 ರಿಂದ ಇಲ್ಲಿಯವರೆಗೆ ಅಬಕಾರಿ ರಕ್ಷಕ ರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ಈ ಪ್ರಕರಣದಲ್ಲಿ ವಶಪಡಿಸಿಕೊಂಡ 90 ಮಿಲಿಯ 26 ವಿಂಡ್ಸರ್ ಡಿಲಕ್ಸ್ ವಿಸ್ಕಿ ಮದ್ಯದ ಟೆಟ್ರಾ ಪ್ಯಾಕೇಟ್ ಗಳು ಹಾಗೂ 180 ಮಿಲಿಯ 08 ಓಲ್ಡ್ ಟಾವರಿನ್ ವಿಸ್ಕಿಯ ಮದ್ಯದ ಟೆಟ್ರಾ ಪ್ಯಾಕೇಟ್ ಗಳನ್ನು ಅಬಕಾರಿ ನಿರೀಕ್ಷಕರ ನಿವೇದನೆಯೊಂದಿಗೆ ಕೇಂದ್ರ ರಾಸಾಯನಿಕ ಪ್ರಯೋಗಾಲಯ, ಅಬಕಾರಿ ಇಲಾಖೆ, ಬೆಂಗಳೂರು ಇಲ್ಲಿಗೆ ದಿಃ 06.05.2019 ರಂದು ತೆಗೆದುಕೊಂಡು ಹೋಗಿರುತ್ತೇನೆ.

ದಿಃ 08.08.2019 ರಂದು ರಾಸಾಯನಿಕ ಪರೀಕ್ಷಾ ವರದಿಯನ್ನು ಹಾಗೂ ಮು.ಮಾಗಳನ್ನು ತಂದು ಕಛೇರಿಗೆ ಹಾಜರುಪಡಿಸಿರುತ್ತೇನೆ. ಅಬಕಾರಿ ನಿರೀಕ್ಷಕರು ನೀಡಿದಂತಹ ನಿವೇದನೆಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ–3 ಎಂದು, ಅದರಲ್ಲಿರುವ ಸಾಕ್ಷಿದಾರರ ಸಹಿಯನ್ನು ನಿಪಿ–3(ಎ) ಎಂದು ಗುರುತಿಸಲಾಯಿತು. ಮುದ್ದೆಮಾಲುಗಳನ್ನು ಈಗ ನೋಡುತ್ತಿದ್ದು, ಅವುಗಳನ್ನು ಈಗಾಗಲೇ ಮು.ಮಾ–1 ರಿಂದ 3 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಶ್ರೀ ಎಸ್.ಆರ್. ವಕೀಲರಿಂದಃ**

ನಾನು ಯಾವುದೇ ಮು.ಮಾಗಳನ್ನು ರಾಸಾಯನಿಕ ಪರೀಕ್ಷೆಗಾಗಿ ತೆಗೆದುಕೊಂಡು ಹೋಗಿಲ್ಲ ಎಂದರ ಸರಿಯಲ್ಲ. ರಾಸಾಯನಿಕ ವರದಿಯಲ್ಲಿ ನಾನು ಸಹಿ ಮಾಡಿಲ್ಲ. ನಾನು ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು. )

ಓ ಹೇ ಕೇಳಿ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಗುಂಡ್ಲುಪೇಟೆ.